# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1340 |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 09.03.2022 |
| ಉತ್ತರಿಸುವ ಸಚಿವರು | : | ಮಾನ್ಯ ಪಶುಸಂಗೋಪನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪಶುಸಂಗೋಪನೆ ವಿಶ್ವವಿದ್ಯಾಲಯದಲ್ಲಿ ಮಂಜೂರಾದ ಹುದ್ದೆಗಳೆಷ್ಟು; ಭರ್ತಿಯಾದ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು) | ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ಇಲ್ಲಿ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಇರುವ ಹುದ್ದೆಗಳ ವಿವರಗಳನ್ನು **ಅನುಬಂಧ** ದಲ್ಲಿ ಲಗತ್ತಿಸಲಾಗಿದೆ. |
| ಆ) | ಹೆಚ್ಚಿನ ಸಂಖ್ಯೆಯಲ್ಲಿ ಹುದ್ದೆಗಳು ಖಾಲಿಯಿದ್ದಲ್ಲಿ, ವಿಶ್ವವಿದ್ಯಾಲಯದ ಕೆಲಸ ಕಾರ್ಯಗಳು ಕುಂಠಿತವಾಗುವುದಿಲ್ಲವೇ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು; | ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ಇಲ್ಲಿನ ವಿವಿಧ ಅಂಗಸಂಸ್ಥೆಗಳಲ್ಲಿ ಖಾಲಿ ಇರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಪೈಕಿ<br>1. 398 ಬೋಧಕ ಹುದ್ದೆಗಳು ಖಾಲಿ ಇದ್ದು, 132 ಸಹಾಯಕ ಪ್ರಾಧ್ಯಾಪಕರನ್ನು ಗುತ್ತಿಗೆ ಆಧಾರದ ಮೇಲೆ ಹಾಗೂ 34 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಎದುರಾಗಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಿಂದ ಅರ್ಹ ಪಶುವೈದ್ಯರನ್ನು ನಿಯೋಜನೆ ಮೇಲೆ ಸೇವೆಯನ್ನು ಪಡೆಯಲಾಗುತ್ತಿದೆ.<br>2. 1073 ಬೋಧಕೇತರ ಹುದ್ದೆಗಳು ಖಾಲಿ ಇದ್ದು 600 ಜನರನ್ನು ಗುತ್ತಿಗೆ ಆಧಾರದ ಮೇಲೆ, 52 ನೌಕರರನ್ನು ದಿನಗೂಲಿ ಆಧಾರದ ಮೇಲೆ ಹಾಗೂ ಇದಲ್ಲದೆ ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಪಡೆಯಲಾಗುತ್ತಿದೆ.<br>ಮೇಲಿನಂತೆ ಹುದ್ದೆಗಳನ್ನು ಭರ್ತಿ ಮಾಡಲಾಗಿದ್ದರು ಸಹ ಇನ್ನು ಕೆಲವು ಹುದ್ದೆಗಳೂ ಖಾಲಿ ಇರುವುದರಿಂದ ವಿಶ್ವವಿದ್ಯಾಲಯದ ಬೋಧನೆ ಹಾಗೂ ಇನ್ನಿತರೆ ಕಾರ್ಯಗಳನ್ನು ನಿರ್ವಹಿಸಲು ತೊಂದರೆಯಾಗುತ್ತಿದ್ದು, ಸದರಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ. |

| | | |
|---|---|---|
| ಇ) | ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಯೋಚನೆ ಸರ್ಕಾರಕ್ಕಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು? | ಹೌದು<br>ಕರ್ನಾಟಕ ಪಶುವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ 305 ಬೋಧಕ ಹುದ್ದೆಗಳನ್ನು ಮತ್ತು 188 ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ. ಆರ್ಥಿಕ ಇಲಾಖೆಯ ಸಹಮತಿ ದೊರಕಿದ ತಕ್ಷಣ ಹುದ್ದೆಗಳನ್ನು ಭರ್ತಿ ಮಾಡಲು ವಿಶ್ವವಿದ್ಯಾಲಯಕ್ಕೆ ನಿರ್ದೇಶನ ನೀಡಲಾಗುವುದು.<br>ಅಲ್ಲದೇ, ಕಲ್ಯಾಣ ಕರ್ನಾಟಕ ಭಾಗದ ಸ್ಥಳೀಯ ವೃಂದದ 226 ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಪಡೆಯುವ ಕುರಿತು ವಿನಾಯಿತಿ ಇರುವುದರಿಂದ ಈ ಬಗ್ಗೆ ಅನುಮತಿ ನೀಡಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಪಸಂಮೀ ಇ-64 ಪಅಸೇ 2022**

(ಪ್ರಭು.ಬಿ. ಚವ್ಹಾಣ್)
ಪಶುಸಂಗೋಪನೆ ಸಚಿವರು

ಅನುಬಂಧ

# TEACHING STAFF POTION

## (Sanctioned, Filled and Vacant Posts)

| CADRE/ GROUP | SACTIONED POSTS | FILLED POSTS | VACANT POSTS |
|---|---|---|---|
| PROFESSOR | 114 | 38 | 76 |
| ASSOCIATE PROFESSOR | 158 | 32 | 126 |
| ASSISTANT PROFESSOR | 416 | 220 | 196 |
| **TOTAL** | **688** | **290** | **398** |

B.V.

**REGISTRAR**

REGISTRAR

Karnataka Veterinary Animal &
Fisheries Sciences University
BIDAR-585 226

# NON-TEACHING STAFF POTION

(Sanctioned, Filled and Vacant Posts)

## CADRE GROUP A, B, C, D

| CADRE/ GROUP | SACTIONED POSTS | FILLED POSTS | VACANT POSTS |
|---|---|---|---|
| GROUP-A | 70 | 12 | 58 |
| GRUOP-B | 35 | 15 | 20 |
| GRUOP-C | 633 | 174 | 459 |
| GRUOP-D | 655 | 119 | 536 |
| **TOTAL** | **1393** | **320** | **1073** |

B.V.P.

REGISTRAR

REGISTRAR

Karnataka Veterinary Animal & Fisheries Sciences University
BIDAR-585 226

B.Eu